ಆ) ಸದರಿ ಇಲಾಖೆಯ ಎಕ್ಸೈಜ್ ರಕ್ಷಕ ಮತ್ತು ಸಬ್‌ಇನ್‌ಸ್ಪೆಕ್ಟರ್ ಗಳಿಗೆ ಬಡ್ತಿ ನೀಡಲು ಸರ್ಕಾರ ಯಾವ ಮಾನದಂಡಗಳನ್ನು ವಿಧಿಸಲಾಗಿದೆ (ಮಾಹಿತಿ ನೀಡುವುದು)?

ಶ್ರೀ ಎಂ.ಪಿ. ರೇಣುಕಾಚಾರ್ಯ (ಅಬಕಾರಿ ಸಚಿವರು) :

ಅ) ಈ ವರ್ಗಗಳಿಗೆ ನಿಯಮನುಸಾರ ಅಬಕಾರಿ ಆಯುಕ್ತರ ಹಂತದಲ್ಲಿ ಬಡ್ತಿ ನೀಡಲಾಗುತ್ತಿದೆ.

ಆ) ಅಬಕಾರಿ ರಕ್ಷಕರ ಹುದ್ದೆಯಲ್ಲಿ ನಿರಂತರವಾಗಿ 5 ವರ್ಷಕ್ಕೆ ಕಡಿಮೆ ಇಲ್ಲದಂತೆ ಸೇವೆ ಸಲ್ಲಿಸಿದ ನೌಕರರನ್ನು ಅಬಕಾರಿ ಹಿರಿಯ ರಕ್ಷಕರ ಹುದ್ದೆಯ ಪದೋನ್ನತಿಗೆ ಪರಿಗಣಿಸಲಾಗುತ್ತದೆ.

ಅಬಕಾರಿ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಡಿಯಲ್ಲಿ ಅಬಕಾರಿ ರಕ್ಷಕರ / ಹಿರಿಯ ರಕ್ಷಕ ವೃಂದದಿಂದ ಅಬಕಾರಿ ಉಪ ನಿರೀಕ್ಷಕರ ವೃಂದಕ್ಕೆ ಬಡ್ತಿ ನೀಡಲು ಶೇಕಡಾ 25 ರಷ್ಟು ಪದೋನ್ನತಿ ಕೋಟಾ ನಿಗಧಿಪಡಿಸಲಾಗಿರುತ್ತದೆ.

ಕನಿಷ್ಟ 3 ವರ್ಷಗಳಿಗೆ ಕಡಿಮೆ ಇಲ್ಲದಂತೆ ಸೇವೆ ಸಲ್ಲಿಸಿದ ಅಬಕಾರಿ ಹಿರಿಯ ರಕ್ಷಕರುಗಳನ್ನು ಅಥವಾ ನಿರಂತರವಾಗಿ 10 ವರ್ಷಗಳ ಸೇವೆ ಸಲ್ಲಿಸಿದ ಅಬಕಾರಿ ರಕ್ಷಕರನ್ನು ಅಬಕಾರಿ ಉಪ ನಿರೀಕ್ಷಕರ ಹುದ್ದೆಯ ಪದೋನ್ನತಿಗೆ ಪರಿಗಣಿಸಲಾಗುತ್ತದೆ.

ಅಬಕಾರಿ ಉಪ ನಿರೀಕ್ಷಕರ ವೃಂದದಿಂದ ಅಬಕಾರಿ ನಿರೀಕ್ಷಕರ ವೃಂದಕ್ಕೆ ಪದೋನ್ನತಿ ನೀಡಲು ಶೇಕಡ 80 ರಷ್ಟು ಕೋಟಾ ಇರುತ್ತದೆ.

ಪದವಿ ಕಾಲೇಜು ಪ್ರಾರಂಭಿಸುವ ಬಗ್ಗೆ

722 (565) ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ತಾಲ್ಲೂಕಿನ ಪೆರೇಸಂದ್ರ ಮತ್ತು ಸುತ್ತಮುತ್ತಲ ಗ್ರಾಮಗಳ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ವ್ಯಾಸಂಗಕ್ಕಾಗಿ ಸುಮಾರು 22

ಕಿ.ಮೀ. ದೂರದಲ್ಲಿರುವ ಚಿಕ್ಕಬಳ್ಳಾಪುರಕ್ಕೆ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಪೆರೇಸಂದ್ರದ ಪದವಿ ಪೂರ್ವ ಕಾಲೇಜಿನ ಕಲಾ ಮತ್ತು ವಿಜ್ಞಾನ ವಿಭಾಗದಲ್ಲಿ ಸುಮಾರು 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಆ ಭಾಗದ ವಿದ್ಯಾರ್ಥಿನಿಯರು ಉನ್ನತ ಶಿಕ್ಷಣ ಪಡೆಯಲು ದೂರದ ಚಿಕ್ಕಬಳ್ಳಾಪುರಕ್ಕೆ ಹೋಗಿ ಬರಲು ತೊಂದರೆಯಾಗಿ ಕಾಲೇಜು ವ್ಯಾಸಂಗವನ್ನೇ ಮೊಟಕುಗೊಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಪೆರೇಸಂದ್ರದಲ್ಲಿ ಪದವಿ ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಉ) ಹಾಗಿದ್ದಲ್ಲಿ, ಈ ಕಾಲೇಜನ್ನು ಎಂದಿನಿಂದ ಪ್ರಾರಂಭಿಸ ಲಾಗುವುದು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಉನ್ನತ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಬಂದಿದೆ.

ಇ) ಬಂದಿದೆ.

ಈ) ಮುಂದಿದೆ.

ಉ) ಈಗಾಗಲೇ ಪ್ರಾರಂಭಿಸಲಾದ ಪದವಿ ಕಾಲೇಜುಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿದ ನಂತರ ಮುಂದಿನ ವರ್ಷಗಳಲ್ಲಿ ಇದನ್ನು ಪರಿಗಣಿಸಲಾಗುವುದು.

ಸುವರ್ಣ ಗ್ರಾಮೋದಯ ಯೋಜನೆ

725 (1093) ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವ ಕಲ್ಯಾಣ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?